# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸೊಸೈಟಿ ಫಾರ್ ಪೀಪಲ್ಸ್ ಇಂಟಗ್ರೇಟೆಡ್ ಡೆವಲಪ್‌ಮೆಂಟ್(ರಿ) ವತಿಯಿಂದ ಚಿಕ್ಕಮಗಳೂರು ಜಿಲ್ಲೆಯಲ್ಲಿ 2014-15ನೇ ಸಾಲಿನಿಂದ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರವನ್ನು ಪ್ರಾರಂಭಿಸಲು ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ: ಮಮಇ/265/ಎಸ್‌ಜೆಡಿ/2004, ದಿನಾಂಕ: 27-11-2004.
2) ಸರ್ಕಾರದ ಆದೇಶ ಸಂಖ್ಯೆ: ಮಮಇ/270/ಪಿಹೆಚ್‌ಪಿ/2013, ದಿ: 28-8-2013.
3) ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ವಿಹಿನಾಸಇ/ಹಿ.ನಾ.ವಿ/ಸಿ.2/ಹಿ.ನಾ.ಸ.ಕೇಂ/110/ಚಿಕ್ಕಮಗಳೂರು/ಆ.ಅನುಮತಿ/2013-14/5831 & 826, ದಿನಾಂಕ: 20-12-2013 ಮತ್ತು 22-5-2014.

ಪ್ರಸ್ತಾವನೆ:

ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ಪ್ರಾರಂಭಿಸಲು ಮೇಲೆ ಕ್ರ.ಸಂ.(1)ರಲ್ಲಿ ಓದಲಾದ ದಿನಾಂಕ: 27-11-2004ರ ಆದೇಶದಲ್ಲಿ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ಬೆಂಗಳೂರು ಗ್ರಾಮಾಂತರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ಗದಗ, ಹಾಸನ, ಹಾವೇರಿ, ಕೊಡಗು, ಕೊಪ್ಪಳ, ಮಂಡ್ಯ, ರಾಮನಗರ, ಉಡುಪಿ, ಉತ್ತರ ಕನ್ನಡ ಹಾಗೂ ಯಾದಗಿರಿ ಜಿಲ್ಲೆಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಮತ್ತು ಈ ಯೋಜನೆಗೆ ರೂ. 7.15 ಲಕ್ಷಗಳ ವೆಚ್ಚವನ್ನು ಭರಿಸಲು ಮೇಲೆ ಕ್ರ.ಸಂ.(2)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಆಡಳಿತಾತ್ಮಕ ಮಂಜೂರಾತಿಯನ್ನು ನೀಡಲಾಗಿದೆ.

ಸೊಸೈಟಿ ಫಾರ್ ಪೀಪಲ್ಸ್ ಇಂಟಗ್ರೇಟೆಡ್ ಡೆವಲಪ್‌ಮೆಂಟ್ (ರಿ), ಈ ಸಂಸ್ಥೆಯಿಂದ 2014-15ನೇ ಸಾಲಿನಿಂದ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರವನ್ನು ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರಾರಂಭಿಸಲು ಸಂಸ್ಥೆಯಿಂದ ನೋಂದಣಿ ನವೀಕರಣ ಪತ್ರವನ್ನು ಅನುದಾನ ಬಿಡುಗಡೆ ಮಾಡುವ ಪೂರ್ವದಲ್ಲಿ ನಿರ್ದೇಶನಾಲಯವು ಪಡೆಯುವ ಷರತ್ತಿಗೊಳಪಟ್ಟು ಆಡಳಿತಾತ್ಮಕ ಮಂಜೂರಾತಿ ನೀಡುವಂತೆ ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರು ಮೇಲೆ ಕ್ರ.ಸಂ.(3)ರಲ್ಲಿ ಓದಲಾದ ದಿನಾಂಕ: 20-12-2013 ಮತ್ತು 22-5-2014ರ ಪತ್ರಗಳಲ್ಲಿ ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಮಮಇ 196 ಪಿಹೆಚ್‌ಪಿ 2014, ಬೆಂಗಳೂರು

## ದಿನಾಂಕ: 24-6-2014

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಸೊಸೈಟಿ ಫಾರ್ ಪೀಪಲ್ಸ್ ಇಂಟಗ್ರೇಟೆಡ್ ಡೆವಲಪ್‌ಮೆಂಟ್ (ರಿ) ವತಿಯಿಂದ ಚಿಕ್ಕಮಗಳೂರು ಜಿಲ್ಲೆಯ ಪೊಲೀಸ್ ಅಧೀಕ್ಷಕರ ಕಛೇರಿಯ ಆವರಣದಲ್ಲಿ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರವನ್ನು ಪ್ರಾರಂಭಿಸಲು ಆಡಳಿತಾತ್ಮಕ ಮಂಜೂರಾತಿಯನ್ನು ನೀಡಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಮಮಇ 265 ಎಸ್‌ಜೆಡಿ 2004, ದಿ: 27-11-2004 ಹಾಗೂ ಸರ್ಕಾರದ ಆದೇಶ ಸಂಖ್ಯೆ: ಮಮಇ/270/ಪಿಹೆಚ್‌ಪಿ/2013, ದಿ: 28-8-2013.ರಲ್ಲಿರುವ ಷರತ್ತುಗಳನ್ನು ಸಂಸ್ಥೆಯು ಪಾಲಿಸತಕ್ಕದ್ದು.

ಸಂಸ್ಥೆಯಿಂದ 2013-14ನೇ ಸಾಲಿನ ಲೆಕ್ಕಪತ್ರ ತಪಾಸಣಾ ವರದಿ, 2014-15ನೇ ಸಾಲಿನ ನೋಂದಣಿ ನವೀಕರಣ ಪತ್ರವನ್ನು ಅನುದಾನ ಬಿಡುಗಡೆ ಮಾಡುವ ಪೂರ್ವದಲ್ಲಿ ನಿರ್ದೇಶನಾಲಯವು ಪಡೆಯತಕ್ಕದ್ದು.

ಈ ಯೋಜನೆಗೆ ತಗಲುವ ವೆಚ್ಚವನ್ನು 2014-15 ನೇ ಸಾಲಿನ ಲೆಕ್ಕಶೀರ್ಷಿಕೆ 2235-02-104-2-04 ಯೋಜನೆ ಉಪಲೆಕ್ಕಶೀರ್ಷಿಕೆ 101 ಸಹಾಯಧನದಡಿ ಲಭ್ಯವಿರುವ ಅನುದಾನದಲ್ಲಿ ಭರಿಸತಕ್ಕದ್ದು.

26/6/14

27/06/14

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 1996, ದಿ: 10-7-1996 ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿರವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಗೋಪಾಲ್)
ಸರ್ಕಾರದ ಉಪ ಕಾರ್ಯದರ್ಶಿ 24/6/14
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

ಇವರಿಗೆ:

1) ಮಹಾಲೇಖಪಾಲರು (ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2) ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
3) ಜಿಲ್ಲಾಧಿಕಾರಿಗಳು, ಚಿಕ್ಕಮಗಳೂರು ಜಿಲ್ಲೆ.
4) ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
5) ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು, ಚಿಕ್ಕಮಗಳೂರು ಜಿಲ್ಲೆ
6) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
7) ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಚಿಕ್ಕಮಗಳೂರು ಜಿಲ್ಲೆ.
8) ಜಿಲ್ಲಾ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಅಧಿಕಾರಿಗಳು, ಚಿಕ್ಕಮಗಳೂರು ಜಿಲ್ಲೆ.
9) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3), ವಿದಾನಸೌಧ, ಬೆಂಗಳೂರು.
10) ಅಧ್ಯಕ್ಷರು/ಕಾರ್ಯದರ್ಶಿ, ಸೊಸೈಟಿ ಫಾರ್ ಪೀಪಲ್ಸ್ ಇಂಟಿಗ್ರೇಟೆಡ್ ಡೆವಲಪ್‌ಮೆಂಟ್ (ರಿ), ನಂ.11, 4ನೇ ಅಡ್ಡರಸ್ತೆ, ವರ್ತಕರ ಭವನದ ಎದುರು, ದೋಣಿಖಣ, ಗಾಂಧಿನಗರ, ಚಿಕ್ಕಮಗಳೂರು-577 101.
11) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ:

1) ಪ್ರಧಾನ ಕಾರ್ಯದರ್ಶಿರವರು,ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಉಪಕಾರ್ಯದರ್ಶಿರವರು, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು.